ಹೊಸ ದಿಗಂತ



29 Oct 2021

## ಕುಣಿದು ಕುಪ್ಪಳಿಸಿದ ವಿದ್ಯಾರ್ಥಿಗಳು | ಸಭಾಪತಿಯಿಂದ ಸಂಕಲ್ಪ ಬೋಧನೆ

# ಅನುರಣಿಸಿದ ಕನ್ನಡದ ಗೀತೆಗಳು!

**ಧಾರವಾಡ:** ಕನ್ನಡ-ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಗರದ ಕರ್ನಾಟಕ ಕಾಲೇಜಿನ ಆವರಣದಲ್ಲಿ ಗುರುವಾರ ನಡೆದ 'ಮಾತಾಡ್ ಮಾತಾಡ್ ಕನ್ನಡ', ಕನ್ನಡಕ್ಕಾಗಿ ನಾವು' ರಾಜ್ಯೋತ್ಸವ ಅಭಿಯಾನದಲ್ಲಿ ಕನ್ನಡದ ಶ್ರೇಷ್ಠತೆ ಸಾರುವ ಗೀತೆಗಳನ್ನು ಸುಶ್ರಾವ್ಯವಾಗಿ ಪ್ರಸ್ತುತಪಡಿಸಲಾಯಿತು.

ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಯಾಗಿ ನಾಡು, ನುಡಿ, ಸಂಸ್ಕೃತಿಯ ಉಳಿವು ಹಾಗೂ ಬೆಳವಣಿಗೆಗಾಗಿ ನಾವು ನಿರ್ವಹಿಸಬೇಕಾದ ಪಾತ್ರದ ಕುರಿತು ವಿಧಾನ ಪರಿಷತ್ತ ಸಭಾಪತಿ ಬಸವರಾಜ ಹೊರಟ್ಟಿ ಸಂಕಲ್ಪ ಬೋಧಿಸಿದರು.

ನಂತರ ಮಾತನಾಡಿದ ಅವರು, ದೇಶದ ರಾಜ್ಯಗಳಲ್ಲಿ ಅಲ್ಲಿನ ಸ್ಥಳೀಯ ಭಾಷೆಗಳಿಗೆ ಪ್ರಥಮ ಆದ್ಯತೆ ದೊರೆಯುತ್ತಿದೆ. ವಿಶಾಲ ಹೃದಯಿಗಳಾದ ನಾವು ಕನ್ನಡಿಗರು ನೆರೆಯ ತಮಿಳು, ತೆಲುಗು, ಮಲೆಯಾಳಿ, ಮರಾಠಿ ಮತ್ತಿತರ ಭಾಷಿಕರೊಂದಿಗೆ ಸಹಬಾಳ್ವೆ ನಡೆಸುತ್ತಿದ್ದೇವೆ ಎಂದರು.



ಅವರಿಗೆ ಪ್ರೀತಿಯಿಂದ ಕನ್ನಡ ಕಲಿಸಬೇಕು. ವಿದ್ಯಾರ್ಥಿಗಳು ಕೈಗೊಂಡ ಸಂಕಲ್ಪವನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡು, ನಡೆಯಬೇಕು. ದೇಶ-ವಿದೇಶದಲ್ಲಿ ನೆಲೆಸಿರುವ ಕನ್ನಡಿಗರು ನಾಡು, ನುಡಿ ಬಗ್ಗೆ ಅಭಿಮಾನ ಹೊಂದಿದ್ದಾರೆ. ಒಟ್ಟಾಗಿ ಕನ್ನಡ ತಾಯಿ ಸೇವೆಗೈಯಲು ಹೇಳಿದರು.

ಐತಿಹಾಸಿಕ ಕರ್ನಾಟಕ ಕಲಾ ಕಾಲೇಜಿನ ಮುಂಭಾಗದ ಆವರಣದಲ್ಲಿ ನೆರೆದಿದ್ದ ಸಾವಿರಾರು ವಿದ್ಯಾರ್ಥಿಗಳು ಕನ್ನಡದ ಹಾಡಿನ ಹಬ್ಬದಲ್ಲಿ ಉತ್ಸಾಹದಿಂದ ಭಾಗವಹಿಸಿದ್ದರು. ನಾಡು ನುಡಿಯ ಅಭಿಮಾನವನ್ನು ಬಡಿದೆಬ್ಬಿಸಿದ ಗೀತೆಗಳಿಗೆ ವಿದ್ಯಾರ್ಥಿ ಸಮೂಹ ಕುಣಿದು ಕುಪ್ಪಳಿಸಿತು.

ರಾಷ್ಟ್ರಕವಿ ಕುವೆಂಪು ರಚಿತ ಜಯಭಾರತ ಜನನಿಯ ತನುಜಾತೆ, ಬಾರಿಸು ಕನ್ನಡ ಡಿಂಡಿಮವ, ಡಾ.ಕೆ.ಎಸ್. ನಿಸಾರ್ ಅಹ್ಮದ್ ಅವರ ಜೋಗದ ಸಿರಿ ಬೆಳಕಿನಲ್ಲಿ, ಹಂಸಲೇಖ ರಚನೆಯ ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು ಹಾಡುಗಳು ರಾಗಬದ್ಧವಾಗಿ ಮನಮೋಹಕವಾಗಿ ಅನುರಣಿಸಿದವು.

ಕರ್ನಾಟಕ ಕಾಲೇಜಿನ ಸಂಗೀತ ವಿಭಾಗದ ವಿದ್ಯಾರ್ಥಿಗಳು ಈ ನಾಡಗೀತೆಗಳನ್ನು ಪ್ರಸ್ತುತಪಡಿಸಿದರು. ಕಾರ್ಯಕ್ರಮ ಸಂಯೋಜಿಸಿದ ಪ್ರಕಾಶ ಮಲ್ಲಿಗವಾಡ ಅವರು ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು ಹಾಡಿಗೆ ಹೆಜ್ಜೆ ಹಾಕಿದಾಗ ನೆರೆದ ವಿದ್ಯಾರ್ಥಿ ಸಮೂಹ ಅವರಿಗೆ ಸಾಥ್ ನೀಡಿತು.

ಸಾಹಿತಿ ಮಾಲತಿ ಪಟ್ಟಣಶೆಟ್ಟಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಉಪವಿಭಾಗಾಧಿಕಾರಿ ಡಾ.ಗೋಪಾಲಕೃಷ್ಣ ಬಿ, ಜಿಪಂ ಉಪಕಾರ್ಯದರ್ಶಿ ರೇಖಾ ಡೊಳ್ಳಿನವರ, ಪ್ರಾಚಾರ್ಯ ಡಾ. ಡಿ.ಬಿ.ಕರಡೋಣಿ, ಡಾ.ಎ.ಎಸ್.ಬೆಲ್ಲದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಜುಳಾ ಯಲಿಗಾರ, ಜಿಲ್ಲಾವಾರ್ತಾಧಿಕಾರಿ ಮಂಜುನಾಥ ಡೊಳ್ಳಿನ ಅನೇಕರು ಇದ್ದರು.